(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2010ರ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2010ರ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ವಿಧೇಯಕದ ಪ್ರಸ್ತಾವ ಅಂಗೀಕಾರವಾಗುವವರೆಗೆ ಧರಣಿ ನಿರತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು ಮತ್ತು ಸದನದ ಬಾವಿಯಿಂದ ಅನೇಕ ಸದಸ್ಯರು ಏಕಕಾಲದಲ್ಲಿ ಮಾತನಾಡುತ್ತಿದ್ದರು)

(ಗೊಂದಲ)

ಅಧ್ಯಕ್ಷರು : ಒಂದು ಪ್ರಕಟಣೆ ಇದೆ.

8. ಪ್ರಕಟಣೆ :

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

"ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ, ಕರ್ನಾಟಕ ವಿಧಾನ ಪರಿಷತ್ತು ದಿನಾಂಕ: 12–3–2010ರಂದು, 2009ನೇ ಸಾಲಿನ ದಂಡ ಪ್ರಕ್ರಿಯೆ ಸಂಹಿತೆ, ಕರ್ನಾಟಕ (ತಿದ್ದುಪಡಿ) ವಿಧೇಯಕವನ್ನು ಯಾವುದೇ ತಿದ್ದುಪಡಿಗಳಿಲ್ಲದೇ ಅಂಗೀಕರಿಸಲಾಗಿದೆ" ಎಂದು ತಿಳಿಸಿರುತ್ತಾರೆ.

(ಗೊಂದಲ)